# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 286 (326) |
| **ಸದಸ್ಯರ ಹೆಸರು** | : ಡಾ|| ಎಂ.ಜಿ.ಮುಳೆ (ವಿಧಾನಸಭಾ ಕ್ಷೇತ್ರ) |
| **ಉತ್ತರಿಸ ಬೇಕಾದ ದಿನಾಂಕ** | : 29.01.2026 |
| **ಉತ್ತರಿಸುವ ಸಚಿವರು** | : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಸವ ಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪ ಕಾಮಗಾರಿಗೆ ಈವರೆಗೆ ಬಿಡುಗಡೆಯಾದ ಅನುದಾನವೆಷ್ಟು ಮತ್ತು ಈ ಯೋಜನೆಯನ್ನು ಪ್ರವಾಸಿಗರಿಗಾಗಿ ಮುಕ್ತಗೊಳಿಸಲು ನಿಗದಿಪಡಿಸಿರುವ ಕಾಲಮಿತಿ ಏನು; | ಬಸವ ಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ಅನುಭವ ಮಂಟಪ ಕಾಮಗಾರಿಯು ಬಸವ ಕಲ್ಯಾಣ ಅಭಿವೃದ್ಧಿ ಪ್ರಾಧಿಕಾರದಿಂದ ಕೈಗೊಳ್ಳಲಾಗುತ್ತಿರುತ್ತದೆ.<br><br>ಪ್ರವಾಸೋದ್ಯಮ ಇಲಾಖೆಯಿಂದ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪಕ್ಕೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. |
| ಆ) | ಬೀದರ್ ಜಿಲ್ಲೆಯ ಗುರುನಾನಕ್ ಝೀರಾ ಮತ್ತು ಪಾಪನಾಶ ದೇವಾಲಯಗಳಿಗೆ ಭೇಟಿ ನೀಡುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಯಾತ್ರಿ ನಿವಾಸ ಹಾಗೂ ವಾಹನ ನಿಲುಗಡೆ (Parking) ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಬೀದರ್ ಜಿಲ್ಲೆಯ ಗುರುನಾನಕ್ ಝೀರಾ ದೇವಸ್ಥಾನದಲ್ಲಿ ಗುರುನಾನಕ್ ಟ್ರಸ್ಟ್ ವತಿಯಿಂದ ಯಾತ್ರಿನಿವಾಸ ಹಾಗೂ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br><br>ಬೀದರ್ ಜಿಲ್ಲೆಯ ಗುರುನಾನಕ್ ಝೀರಾ ದೇವಾಲಯಕ್ಕೆ ಭೇಟಿ ನೀಡುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಯಾತ್ರಿನಿವಾಸ ಹಾಗೂ ವಾಹನ ನಿಲುಗಡೆ ಸೌಲಭ್ಯಗಳ ಕುರಿತು ಪ್ರಸ್ತಾವನೆ ಇಲಾಖೆಗೆ ಸ್ವೀಕೃತವಾಗಿರುವುದಿಲ್ಲ.<br><br>ಬೀದರ್ ಜಿಲ್ಲೆಯ ಶ್ರೀ ಪಾಪನಾಶ ದೇವಸ್ಥಾನ ಬಳಿ 2024-25ನೇ ಸಾಲಿನಲ್ಲಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಪ್ರಸಾದ್ ಯೋಜನೆಯಡಿ ರೂ.2241.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಮೂಲಸೌಕರ್ಯಗಳ ಅಭಿವೃದ್ಧಿ ಕಾಮಗಾರಿ ಮಂಜೂರಾಗಿದ್ದು, ಸದರಿ ಕಾಮಗಾರಿ ಪ್ರಗತಿಯಲ್ಲಿದೆ. |
| ಇ) | ಬೀದರ್‌ನಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಮ್ಮಿಕೊಳ್ಳಲಾದ 'ಡಿಸ್ಕವರ್ ಬೀದರ್' (Discover Bidar) ಅಭಿಯಾನದ ಪ್ರಗತಿ ಮತ್ತು ಅದಕ್ಕಾಗಿ ವ್ಯಯಿಸಲಾದ ಮೊತ್ತವೆಷ್ಟು? | "ಡಿಸ್ಕವರ್ ಬೀದರ್" ಅನ್ನು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯ ಭಾರತ ಸರ್ಕಾರದಿಂದ ಹಮ್ಮಿಕೊಳ್ಳಲಾಗಿದ್ದು, ಬೀದರ್ ಪ್ರವಾಸಿ ತಾಣಗಳ ವಿಡಿಯೋಗ್ರಾಫಿ ಹಾಗೂ ಫೋಟೋಗ್ರಾಫಿ ಮಾಡಲಾಗಿರುತ್ತದೆ. |

**ಸಂಖ್ಯೆ:ಟಿಓಆರ್ 31 ಟಿಡಿವಿ 2026**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು